**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 63 ಟಿಪಿಇ 2019.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್ 6ನೇ ಮಹಡಿ,
ಬೆಂಗಳೂರು, ದಿನಾಂಕ: 26/09/2020.

ಇವರಿಂದ:-
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು-560 001.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ
ಆಪ್ತ ಶಾಖೆ
ಸಂಖ್ಯೆ 725
ದಿನಾಂಕ 2/9/2020

176394/2020

ಇವರಿಗೆ:-
ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ,
ಬೆಂಗಳೂರು.

ಮಾನ್ಯರೆ,

ವಿಷಯ:- ಆರ್.ಎನ್ ಶೆಟ್ಟಿ ಪಾಲಿಟೆಕ್ನಿಕ್, ಶಿರಸಿ ಸಂಸ್ಥೆಯಲ್ಲಿ 2005ರ ನಂತರದಲ್ಲಿ ವೇತನಾನುದಾನಕ್ಕೆ ಅನುಮೋದನೆಗೊಂಡ ಸಿಬ್ಬಂದಿಗಳಿಗೆ ವೇತನಾನುದಾನ ದಿನಾಂಕದಿಂದ ವೇತನ ಪಾವತಿ ಮಾಡುವ ಕುರಿತು.

ಉಲ್ಲೇಖ:- ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 43 ಡಿವಿಪಿ(1)/2018 ದಿನಾಂಕ:11.10.2019

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪ್ರಸ್ತಾವನೆಯನ್ನು ಪರಿಶೀಲಿಸುವ ಸಲುವಾಗಿ ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆಯಲಾಗಿರುತ್ತದೆ. 27 ಪಾಲಿಟೆಕ್ನಿಕ್ ಸಂಸ್ಥೆಗಳ ಅನುದಾನಿತ ಸಿಬ್ಬಂದಿಗಳಿಗೆ ಸದರಿ ಸಂಸ್ಥೆಗಳು ವೇತನಾನುದಾನಕ್ಕೆ ಒಳಪಟ್ಟ ದಿನಾಂಕದಿಂದ ಅನ್ವಯವಾಗುವಂತೆ ವೇತನ ಬಾಕಿ ಪಾವತಿಸಲು ದಿನಾಂಕ:25.09.2009ರಂದು ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ. ಅದರಂತೆ, ವೇತನ ಬಾಕಿ ಪಾವತಿಸಲು ಬಾಕಿಯಿರುವ ಎಲ್ಲಾ ಪ್ರಸ್ತಾವನೆಗಳನ್ನು ಒಂದು ತಿಂಗಳೊಳಗಾಗಿ ಸಲ್ಲಿಸುವಂತೆ, ನಿಗದಿತ ಅವಧಿಯಲ್ಲಿ ಸಲ್ಲಿಸದಿದ್ದ ಪಕ್ಷದಲ್ಲಿ ಅಂತಹ ಪಾಲಿಟೆಕ್ನಿಕ್‌ಗಳಿಗೆ ಸಂಬಂಧಪಟ್ಟ ಪ್ರಸ್ತಾವನೆಗಳನ್ನು ಭವಿಷ್ಯದಲ್ಲಿ ಪರಿಗಣಿಸಲಾಗುವುದಿಲ್ಲವೆಂದು ಆರ್ಥಿಕ ಇಲಾಖೆಯು ಟಿಪ್ಪಣಿ-25 ವೆಚ್ಚ-8/2019 ದಿನಾಂಕ:11.09.2020ರಲ್ಲಿ ತಿಳಿಸಿರುತ್ತದೆ.

ಈ ಹಿನ್ನೆಲೆಯಲ್ಲಿ, ದಿನಾಂಕ:25.09.2009ರ ಸಚಿವ ಸಂಪುಟದ ಅನುಮೋದನೆಯಂತೆ ವೇತನ ಬಾಕಿ ಪಾವತಿಸಲು ಬಾಕಿ ಉಳಿದಿರುವ ಪ್ರಸ್ತಾವನೆಗಳನ್ನು 15 ದಿನಗಳೊಳಗಾಗಿ ಸಲ್ಲಿಸುವಂತೆ, ಸಲ್ಲಿಸದಿದ್ದ ಪಕ್ಷದಲ್ಲಿ ಮುಂದಿನ ಆಗು-ಹೋಗುಗಳಿಗೆ ತಾವೇ ಜವಾಬ್ದಾರರಾಗಿರುತ್ತೀರಿ ಎಂದು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

30/09/2020

ತಮ್ಮ ವಿಶ್ವಾಸಿ,

26/09/2020
(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)

ಸಂ. 23
ತಾ. 29.9.20
ಬೆಂಗಳೂರು-1